ಕರ್ನಾಟಕ ಸರ್ಕಾರ

ಗ್ರಾಅಪ 19 ಜೈಅಯೋ 2018

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:**03.04.2018.**

# ಸುತ್ತೋಲೆ

ವಿಷಯ : **2018-19ನೇ** ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಗೊಬ್ಬರ ನಿರ್ವಹಣೆ ಕಾರ್ಯಕ್ರಮ (NBMMP)ದ ಅನುಷ್ಠಾನ ಹಾಗೂ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಸಮರ್ಪಕವಾಗಿ ಪಾವತಿ, ಅನುಷ್ಠಾನಿಸುವ ಕುರಿತು.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 71 ಜೈಅಯೋ 2017, ದಿನಾಂಕ 30.11.2017.
2. ಗ್ರಾಮೀಣ ಇಂಧನ ಕಾರ್ಯಕ್ರಮದ ಪ್ರಗತಿ ಪರಿಶೀಲನಾ ಸಭೆಯ ನಡವಳಿ ಸಂಖ್ಯೆ ಗ್ರಾಅಪ 43 ಜೈಅಯೋ 2017, ದಿನಾಂಕ 12.12.2018, 17.08.2017 ಮತ್ತು 08.06.2017.

ರಾಷ್ಟ್ರೀಯ ಜೈವಾನಿಲ ಮತ್ತು ಗೊಬ್ಬರ ನಿರ್ವಹಣೆ ಕಾರ್ಯಕ್ರಮ(NBMMP)ದವು ಕೇಂದ್ರ ವಲಯದ ಕಾರ್ಯಕ್ರಮವಾಗಿದ್ದು, ಪ್ರತಿ ವರ್ಷ ಕೇಂದ್ರ ಸರ್ಕಾರದ ಮಾರ್ಗಸೂಚಿ, ನಿಗದಿಪಡಿಸಲಾಗುವ ಭೌತಿಕ ಗುರಿ ಹಾಗೂ ಬಿಡುಗಡೆ ಮಾಡುವ ಸಹಾಯಧನದನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಕಳೆದ ಸುಮಾರು 3-4 ವರ್ಷಗಳಿಂದ ಕಾರ್ಯಕ್ರಮದಡಿ ಪ್ರಗತಿ ಅತ್ಯಂತ ಕಡಿಮೆಯಾಗಿರುವುದನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆ. ಕಾರ್ಯಕ್ರಮದ ಪ್ರಯೋಜನವನ್ನು ಸಮರ್ಪಕವಾಗಿ ಹಾಗೂ ಯಶಸ್ವಿಯಾಗಿ ಗ್ರಾಮೀಣ ಜನತೆಗೆ ತಲುಪಿಸಲು ಕಾರ್ಯಕ್ರಮವನ್ನು ಇನ್ನೂ ಹೆಚ್ಚಿನ ರೀತಿಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಈ ಕೆಳಕಂಡ ಅಂಶಗಳಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದೆ.

1. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 71 ಜೈಅಯೋ 2017, ದಿನಾಂಕ 30.11.2017ರಲ್ಲಿನ ಅಂಶಗಳನ್ನು ಮುಂದುವರಿಸುವುದು.
2. ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ನು ಪಾಲಿಸುವುದು.
3. ಆಯಾ ಆರ್ಥಿಕ ಸಾಲಿನಲ್ಲಿ ಬಿಡುಗಡೆ ಮಾಡಿದ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಆಯಾ ಸಾಲಿನಲ್ಲಿ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ನಿಯಮಾನುಸಾರ ಪರಿಶೀಲಿಸಿ ಪಾವತಿಸಿ, 31ನೇ ಮಾರ್ಚ್ ಅಂತ್ಯಕ್ಕೆ ಲಭ್ಯವಿರುವ ಅನುದಾನದ ವಿವರಗಳನ್ನು(ಕೇಂದ್ರ ಮತ್ತು ರಾಜ್ಯ) ಸರ್ಕಾರಕ್ಕೆ ವರದಿ ಮಾಡುವುದು ಹಾಗೂ ಅನುದಾನವನ್ನು ಸರ್ಕಾರ ಕಾರ್ಯಕ್ರಮದ ಉಳಿತಾಯ ಖಾತೆಗೆ ಹಿಂದಿರುಗಿಸುವುದು.
4. ಕಾರ್ಯಕ್ರಮದಡಿ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವಾಗ ಬಿಡುಗಡೆಯಾದ ಅನುದಾನ / ಸಾಧಿಸಿದ ಭೌತಿಕ ಪ್ರಗತಿಗೆ ಸರಿಸಮವಾಗಿ ಆರ್ಥಿಕ ಪ್ರಗತಿಯನ್ನು ನೀಡುವುದು. ಈ ವಿವರಗಳು AG ಆಡಿಟ್ ವೆಚ್ಚಕ್ಕೆ ತಾಳೆಯಾಗುವಂತಿರಬೇಕು.

5. ಕಾರ್ಯಕ್ರಮದಡಿ ಸಾಧಿಸಿದ ಪ್ರಗತಿಗೆ ಅನುದಾನದ ಅಗತ್ಯತೆ ಇದ್ದಲ್ಲಿ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವುದು.
6. ಪ್ರತಿ ತ್ರೈಮಾಸಿಕ ಅಂತ್ಯಕ್ಕೆ ಕಾರ್ಯಕ್ರಮದಡಿ ಲಭ್ಯವಿರುವ ಅನುದಾನದ ವಿವರಗಳನ್ನು ಬ್ಯಾಂಕ್ Statement ಪ್ರತಿಯೊಂದಿಗೆ ಸರ್ಕಾರಕ್ಕೆ ವರದಿ ಮಾಡುವುದು.
7. ಕಾರ್ಯಕ್ರಮದಡಿ ನಿಗದಿಪಡಿಸಿದ ಭೌತಿಕ ಗುರಿಯನ್ನು ಪೂರ್ಣ ಪ್ರಮಾಣದಲ್ಲಿ ಸಾಧಿಸಲು ಜಿಲ್ಲಾ ಪಂಚಾಯತ್‌ನ ಅನುಷ್ಠಾನಾಧಿಕಾರಿಗಳು ಯೋಜನೆಯ ಉಸ್ತುವಾರಿ ಹೊಣೆ ಹೊತ್ತಿರುವ ಸಗ್ರಾಇಂಕಾ ಯೋಜನೆ ಅಭಿಯಂತರಿಗೆ ಕಾಲಕಾಲಕ್ಕೆ ಸೂಕ್ತ ನಿರ್ದೇಶನ ನೀಡುವುದು.

(ಸರ್ಕಾರದ ಪ್ರಧಾನ ಕಾರ್ಯದರ್ಶಿರವರಿಂದ
ಅನುಮೋದಿಸಲ್ಪಟ್ಟಿದೆ).

(ಎನ್. ಕೃಷ್ಣಪ್ಪ ಕೋಡಿಪಾಳ್ಯ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಅಪ ಇಲಾಖೆ.
4. ವಿಶೇಷಾಧಿಕಾರಿ, ಇಲಾಖಾ ಗಣಕ ಕೇಂದ್ರ, ಗ್ರಾಅಪ ಇಲಾಖೆ.
5. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಯೋಜನಾ ಅಭಿಯಂತರರು (ಸಗ್ರಾಇಂಕಾ) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
6. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.